ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2019-20 ದಿನಾಂಕ: 04-10-2019

## ಮಾಧ್ಯಮದವರ ಗಮನಕ್ಕೆ

ದಿನಾಂಕ 10-10-2019 ರಂದು ಬೆಂಗಳೂರಿನ ಇಸ್ರೋದ ಸಭಾ ಭವನದಲ್ಲಿ ಪ್ರಧಾನ ಮಂತ್ರಿಗಳ ಇನ್ನೋವೇಟಿವ್ ಲರ್ನಿಂಗ್ ಪ್ರೋಗ್ರಾಂನ ಉದ್ಘಾಟನೆ ಸಮಾರಂಭವನ್ನು ಬೆಳಿಗ್ಗೆ 9-30 ಗಂಟೆಗೆ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮವನ್ನು ಕೇಂದ್ರ ಮಾನವ ಸಂಪನ್ಮೂಲ ಅಭಿವೃದ್ಧಿ ಇಲಾಖೆ ಸಚಿವರು ಉದ್ಘಾಟಿಸಲಿದ್ದಾರೆ.

ಕಾರ್ಯಕ್ರಮಕ್ಕೆ ಭಾಗವಹಿಸಲು ಪಾಸ್‌ಗಳು ಕಡ್ಡಾಯವಾಗಿದ್ದು, 30 ಜನ ಪತ್ರಕರ್ತರಿಗೆ ಮಾತ್ರ ಭಾಗವಹಿಸಲು ಅವಕಾಶವಿರುತ್ತದೆ. ರಾಜ್ಯಮಟ್ಟದ ಪತ್ರಿಕೆಗಳ, ವಿದ್ಯುನ್ಮಾನ ಮಾಧ್ಯಮದ ಪತ್ರಕರ್ತರು ತಮ್ಮ ಹೆಸರುಗಳನ್ನು ದಿನಾಂಕ: 05-10-2019 ಮಧ್ಯಾಹ್ನ 2 ಗಂಟೆ ಒಳಗಾಗಿ **pressandnewsbangalore@gmail.com** ಇಮೇಲ್ ವಿಳಾಸಕ್ಕೆ ಕಳುಹಿಸಿಕೊಡಬೇಕಾಗಿ ವಿನಂತಿ. ಮೊದಲು ನೊಂದಾಯಿಸಿಕೊಂಡವರಿಗೆ ಆದ್ಯತೆ.

ಉಪ ನಿರ್ದೇಶಕರು (ವಾರ್ತೆ)

## ಪತ್ರಿಕಾ ಪ್ರಕಟಣೆ

## ಕಬ್ಬನ್ ಉದ್ಯಾನವನದಲ್ಲಿ ಈ ಭಾನುವಾರ

ಬೆಂಗಳೂರು, ಅಕ್ಟೋಬರ್ 04 (ಕರ್ನಾಟಕ ವಾರ್ತೆ)

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ: 06-10-2019 ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಕಬ್ಬನ್ ಉದ್ಯಾನವನದ ಆವರಣದಲ್ಲಿ ಬೆಳಿಗ್ಗೆ **8.00** ಗಂಟೆಯಿಂದ ಸಂಜೆ **5.00** ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
2) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

<u>ಖ ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ</u>

- ಬೆಳಿಗ್ಗೆ **7.00** ಗಂಟೆಯಿಂದ ಬೆಳಿಗ್ಗೆ **8.00** ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ ಸಹಯೋಗದೊಂದಿಗೆ ಶ್ರೀಮತಿ ಸೌಮ್ಯ ಸೋಮಶೇಖರ್ ರವರಿಂದ ಭರತನಾಟ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

- ಬೆಳಿಗ್ಗೆ **8.00** ಗಂಟೆಯಿಂದ ಬೆಳಿಗ್ಗೆ **9.00** ಗಂಟೆಯವರೆಗೆ ಬಾಲಭವನ ಸೊಸೈಟಿ ಸಹಯೋಗದೊಂದಿಗೆ "ಉದ್ಯಾನವನದಲ್ಲಿ ಉದಯರಾಗ" ಎಂಬ ಶೀರ್ಷಿಕೆಯಡಿ ಜತಿನ್ ಅಕಾಡೆಮಿ ತಂಡದವರಿಂದ ಭರತನಾಟ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

## <u>ಅಸಾಧಾರಣ ಪ್ರತಿಭೆಯುಳ್ಳ ಮಕ್ಕಳಿಗೆ ಜಿಲ್ಲಾ ಮಟ್ಟದ ಪ್ರಶಸ್ತಿ</u>

ಬೆಂಗಳೂರು, ಅಕ್ಟೋಬರ್ **04** (ಕರ್ನಾಟಕ ವಾರ್ತೆ)

ವಿವಿಧ ಕ್ಷೇತ್ರಗಳಲ್ಲಿ ಅಸಾಧಾರಣ ಪ್ರತಿಭೆ ಹೊಂದಿರುವ ಪ್ರತಿಭಾವಂತ ಮಕ್ಕಳಿಗೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ವತಿಯಿಂದ 2019 ನೇ ನವೆಂಬರ್ 14 ರಂದು ಪ್ರತಿ ಜಿಲ್ಲಾ ಮಟ್ಟದಲ್ಲಿ ಆಯೋಜಿಸಲಾಗುತ್ತಿರುವ ಮಕ್ಕಳ ದಿನಾಚರಣೆ ಕಾರ್ಯಕ್ರಮದಲ್ಲಿ ಅಭಿನಂದಿಸಲು ಉದ್ದೇಶಿಸಲಾಗಿದೆ. ಈ ಸಂಬಂಧ ರಾಜ್ಯ ವ್ಯಾಪ್ತಿಯಲ್ಲಿ ಅಸಾಧಾರಣ ಪ್ರತಿಭೆ ತೋರಿರುವಂತಹ 5 ರಿಂದ 18 ವರ್ಷದ ಒಳಗಿನ ಮಕ್ಕಳ ಮಾಹಿತಿ ಗಮನಕ್ಕೆ ಬಂದಿದ್ದಲ್ಲಿ ಅವರ ವಿವರ/ವಿಳಾಸಗಳನ್ನು ಆಯಾ ಜಿಲ್ಲೆಯ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಕೇಂದ್ರ ಕಚೇರಿಗೆ ಕಳುಹಿಸಿಕೊಡುವಂತೆ ಇಲಾಖೆ ಪ್ರಕಟಣೆ ತಿಳಿಸಿದೆ.



ಸನ್ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರಾದ ಶ್ರೀ ಬಿ.ಶ್ರೀರಾಮುಲು ಅವರು ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ವಿದೇಶಿ ವಿಶ್ವವಿದ್ಯಾಲಯದಲ್ಲಿ ಉನ್ನತ ವ್ಯಾಸಂಗಕ್ಕೆ ಬಡ್ಡಿ ರಹಿತ ಸಾಲ ಯೋಜನೆಯಲ್ಲಿ ಕು॥ ಸುಪ್ರಿಯಾ ಇವರಿಗೆ ಜರ್ಮನಿಯ ಹ್ಯಾಂಬರ್ಗ್ ಯುನಿರ್ವಸಿಟಿಯಲ್ಲಿಸ್ನಾತಕೋತ್ತರ ಇಂಜಿನಿಯರಿಂಗ್ ವ್ಯಾಸಂಗಕ್ಕಾಗಿ ಸಾಲದ ಚೆಕ್ ವಿತರಿಸುತ್ತಿರುವುದು.